# ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಎಂಟನೇ ಅಧಿವೇಶನ)

## ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 02ನೇ ಜುಲೈ, 2015
(ಸಮಯ: ಬೆಳಗ್ಗೆ 10.30 ಗಂಟೆಗೆ)

-----

### 1. ವರದಿಯನ್ನೊಪ್ಪಿಸುವುದು

ಶ್ರೀ ಎನ್.ಹೆಚ್. ಶಿವಶಂಕರ ರೆಡ್ಡಿ (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಖಾಸಗಿ ಸದಸ್ಯರುಗಳ ವಿಧೇಯಕ ಹಾಗೂ ನಿರ್ಣಯಗಳ ಸಮಿತಿ) ಅವರು 2015ನೇ ಸಾಲಿನ ಸಮಿತಿಯ ಎರಡನೇ ವರದಿಯನ್ನು ಒಪ್ಪಿಸುವುದು.

### 2. ವಿತ್ತೀಯ ಕಾರ್ಯಕಲಾಪಗಳು

2015-16ನೇ ಸಾಲಿನ ಈ ಕೆಳಕಂಡ ಅನುದಾನ ಬೇಡಿಕೆಗಳ ಮೇಲೆ ಮುಂದುವರೆದ ಚರ್ಚೆ ಮತ್ತು ಸರ್ಕಾರದ ಉತ್ತರ;

| ಬೇಡಿಕೆ ಸಂಖ್ಯೆ | ಬೇಡಿಕೆಗಳ ಹೆಸರು |
|---|---|
| 07 | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ |
| 01 | ಕೃಷಿ ಮತ್ತು ತೋಟಗಾರಿಕೆ |

### 3. ಪ್ರಶ್ನೋತ್ತರ

**ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ**

**ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ನಾಲ್ಕನೇ ಪಟ್ಟಿ**

### 4. ಗಮನ ಸೆಳೆಯುವ ಸೂಚನೆಗಳು

1. ಶ್ರೀ ಹೆಚ್.ಎಸ್. ಶಿವಶಂಕರ್ ಅವರು ದಾವಣಗೆರೆ ವಿಶ್ವವಿದ್ಯಾಲಯದಲ್ಲಿ ಹಾಗೂ ವಿಶ್ವವಿದ್ಯಾಲಯದ ವ್ಯಾಪ್ತಿಗೊಳಪಡುವ ಕಾಲೇಜುಗಳಲ್ಲಿ ಅಧ್ಯಾಪಕರು ಮತ್ತು ಸಿಬ್ಬಂದಿಗಳನ್ನು ನೇಮಿಸುವ ಹಾಗೂ ಅನುದಾನ ನೀಡುವ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.
2. ಶ್ರೀ ಕೆ.ಆರ್. ರಮೇಶ್‌ಕುಮಾರ್ ಅವರು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಯ ವ್ಯಾಪ್ತಿಯಲ್ಲಿ 30ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮಾವು, ಗೇರು ಇತ್ಯಾದಿ ತೋಟಗಾರಿಕಾ ಗಿಡಗಳು ತೀವ್ರ ಮಳೆ ಅಭಾವದಿಂದ ಹಾನಿಗೊಳಗಾಗಿರುವುದರಿಂದ ಉಂಟಾಗಿರುವ ನಷ್ಟಕ್ಕೆ ಪರಿಹಾರ ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

**ಪು.ತಿ.ನೋ.,.**

3. ಶ್ರೀ ಎನ್. ಚಲುವರಾಯಸ್ವಾಮಿ ಅವರು ಮಂಡ್ಯ ಡಿ.ಸಿ.ಸಿ. ಬ್ಯಾಂಕಿನ ತತ್ಪೂರ್ವ ಅಧ್ಯಕ್ಷರು ಕಾನೂನುಬಾಹಿರವಾಗಿ ಆಯ್ಕೆಯಾಗಿರುವುದನ್ನು ರದ್ದುಪಡಿಸಬೇಕೆಂದು ಹಾಗೂ ಈ ಚುನಾವಣಾ ಪ್ರಕ್ರಿಯೆಗೆ ಕಾರಣರಾದ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಸಹಕಾರ ಮತ್ತು ಸಕ್ಕರೆ ಸಚಿವರ ಗಮನ ಸೆಳೆಯುವುದು.

4. ಶ್ರೀ ಕೆ.ಜಿ.ಬೋಪಯ್ಯ ಅವರು ಕೊಡಗು ಜಿಲ್ಲೆಯ ವಿರಾಜಪೇಟೆ ಹಾಗೂ ಮಡಿಕೇರಿ ತಾಲ್ಲೂಕಿನ ಮಡಿಕೇರಿ–ಮೈಸೂರು, ಬೆಂಗಳೂರು–ಗೋಣಿಕೊಪ್ಪ–ಮೈಸೂರು ಹಾಗೂ ಬೆಂಗಳೂರು–ಕುಶಾಲನಗರ–ಚಿತ್ರದುರ್ಗ ಮಾರ್ಗಗಳಲ್ಲಿ ಪುನ: ಸಾರಿಗೆ ಸೇವೆಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಸಾರಿಗೆ ಸಚಿವರ ಗಮನ ಸೆಳೆಯುವುದು.

5. ಶ್ರೀ ಹೆಚ್.ಡಿ.ರೇವಣ್ಣ ಅವರು ಹೊಳೆನರಸೀಪುರ ಪಟ್ಟಣದಲ್ಲಿರುವ ಸರ್ಕಾರಿ ಕಾನೂನು ಕಾಲೇಜಿನಲ್ಲಿ ೩ ಮತ್ತು ೫ನೇ ವರ್ಷದ ಕಾನೂನು ಪದವಿ ಪ್ರಾರಂಭಿಸಲು ಅನುಮತಿ ದೊರಕಿಸಿ ಕೊಡುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

6. ಶ್ರೀ ಕೆ.ಬಿ.ಪ್ರಸನ್ನಕುಮಾರ್ ಅವರು ಶಿವಮೊಗ್ಗ ನಗರದ ರೈಲ್ವೆ ನಿಲ್ದಾಣದಲ್ಲಿ ಸಮರ್ಪಕ ಪ್ಲಾಟ್ ಫಾರಂ ಇಲ್ಲದಿರುವುದು ಹಾಗೂ ಶಿವಮೊಗ್ಗ–ಬೆಂಗಳೂರು ನಡುವೆ ಸಂಚರಿಸುವ ರೈಲಿನಲ್ಲಿ ಸ್ವಚ್ಛತೆ ಇಲ್ಲದಿರುವುದರಿಂದ ಸಾರ್ವಜನಿಕರಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಮಾನ್ಯ ಮೂಲಭೂತ ಸೌಲಭ್ಯ ಅಭಿವೃದ್ಧಿ ಹಾಗೂ ವಾರ್ತಾ ಮತ್ತು ಹಜ್ ಸಚಿವರ ಗಮನ ಸೆಳೆಯುವುದು.

7. ಶ್ರೀಮತಿ ಶಶಿಕಲಾ ಅಣ್ಣಾಸಾಹೇಬ್ ಜೋಲ್ಲೆ ಅವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ರಾಜ್ಯವಲಯ ಹಾಗೂ ಆರ್.ಸಿ.ಹೆಚ್. ಯೋಜನೆಯಡಿಯಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವ ಶುಶ್ರೂಷಕಿಯರ ಸೇವೆಯನ್ನು ಖಾಯಂಗೊಳಿಸಿ ವೇತನವನ್ನು ಪರಿಷ್ಕರಿಸುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಗಮನ ಸೆಳೆಯುವುದು.

8. ಶ್ರೀಯುತರುಗಳಾದ ಎಂ. ರಾಜಣ್ಣ, ಕೆ.ಎಸ್.ಮಂಜುನಾಥಗೌಡ, ನಾರಾಯಣಗೌಡ, ಪಿಳ್ಳಮುನಿಶಾಮಪ್ಪ ಮತ್ತು ಸಿ.ಎನ್. ಬಾಲಕೃಷ್ಣ ಇವರುಗಳು ರಾಜ್ಯದ ಪಶುವೈದ್ಯಕೀಯ ಆಸ್ಪತ್ರೆಗಳಲ್ಲಿ ರೈತರ ರಾಸುಗಳಿಗೆ ನೀಡುತ್ತಿದ್ದ ಕೃತಕ ಗರ್ಭಧಾರಣೆಯ ಚಿಕಿತ್ಸೆಗೆ ಈ ಹಿಂದೆ ನಿಗದಿಪಡಿಸಿದ್ದ ದರವನ್ನು ಮುಂದುವರಿಸುವ ಬಗ್ಗೆ ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರ ಗಮನ ಸೆಳೆಯುವುದು.

9. ಶ್ರೀ ಜೆ.ಟಿ. ಪಾಟೀಲ್ ಅವರು ದೆಹಲಿಯ ಅಕ್ಷರಧಾಮ ಮಾದರಿಯಲ್ಲಿ ಕೂಡಲಸಂಗಮ ಹಾಗೂ ಚಿಕ್ಕಸಂಗಮವನ್ನು ಅಭಿವೃದ್ಧಿಪಡಿಸುವಲ್ಲಿ ಆಗುತ್ತಿರುವ ವಿಳಂಬದ ಬಗ್ಗೆ ಮಾನ್ಯ ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರ ಗಮನ ಸೆಳೆಯುವುದು.

10. ಶ್ರೀ ಮಾಲೀಕಯ್ಯ ವೆಂಕಯ್ಯ ಗುತ್ತೇದಾರ್ ಅವರು ಕಲಬುರಗಿ ಜಿಲ್ಲೆಯ ಅಫಜಲಪೂರ ತಾಲ್ಲೂಕಿನಲ್ಲಿರುವ ರೈತರ ಜಮೀನುಗಳಲ್ಲಿನ ಪಂಪ್‌ಸೆಟ್‌ಗಳಿಗೆ ಅಗತ್ಯ ವಿದ್ಯುತ್ ಪೂರೈಕೆಗಾಗಿ ಡಿಗ್ರಿ ಕ್ರಾಸ್ ಮತ್ತು ಸಾಗನೂರು ಬಳಿ ೧೦೦ ಕೆ.ವಿ. ವಿದ್ಯುತ್ ಉಪಕೇಂದ್ರಗಳನ್ನು ಸ್ಥಾಪಿಸುವ ಬಗ್ಗೆ ಮಾನ್ಯ ಇಂಧನ ಸಚಿವರ ಗಮನ ಸೆಳೆಯುವುದು.

11. ಶ್ರೀ ಗುರು ಪಾಟೀಲ್ ಶಿರವಾಳ ಅವರು ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಕೆಂಭಾವಿ ಪಟ್ಟಣವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಣೆ ಮಾಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12. ಶ್ರೀ ಸಿ.ಎನ್. ಬಾಲಕೃಷ್ಣ ಅವರು ಚನ್ನರಾಯಪಟ್ಟಣ ವಿಧಾನಸಭಾ ಕ್ಷೇತ್ರದ ಕಿರೀಸಾವೆ ದಾಖಲೆ ಗ್ರಾಮದ ದಾಸನ ಕೆರೆಯ ಅರ್ಧಕ್ಕಿಂತ ಹೆಚ್ಚು ಭಾಗವನ್ನು ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 5. ಅರ್ಧ ಗಂಟೆ ಕಾಲಾವಧಿ ಚರ್ಚೆ

1. ಶ್ರೀ ಎಸ್.ಟಿ. ಸೋಮಶೇಖರ್ ಅವರು "ತಿಪ್ಪಗೊಂಡನಹಳ್ಳಿ ಜಲಾಶಯದ ಸುತ್ತಮುತ್ತಲಿರುವ ನಿರ್ಬಂಧಿತ ವಲಯದ" ಬಗ್ಗೆ ದಿನಾಂಕ: 29.06.2015ರ ಸದನದಲ್ಲಿ ಉತ್ತರಿಸುವ ಪ್ರಶ್ನೆಗಳ ಒಂದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 15(64)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

2. ಶ್ರೀ ಎಂ.ಕೃಷ್ಣಾರೆಡ್ಡಿ ಅವರು "ಅಕ್ರಮವಾಗಿ ಬಡಾವಣೆ ನಿರ್ಮಿಸುವ" ಬಗ್ಗೆ ದಿನಾಂಕ: 29.06.2015ರ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಒಂದನೇ ಪಟ್ಟಿಯಲ್ಲಿನ ಪ್ರಶ್ನೆ ಸಂಖ್ಯೆ: 59(55)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

## 6. ಖಾಸಗಿ ಸದಸ್ಯರ ಕಾರ್ಯಕಲಾಪಗಳು

### ಖಾಸಗಿ ಸದಸ್ಯರ ನಿರ್ಣಯ

**ಶ್ರೀ ಎಂ.ಟಿ.ಕೃಷ್ಣಪ್ಪ ಅವರು ಕೆಳಕಂಡ ನಿರ್ಣಯವನ್ನು ಮಂಡಿಸುವುದು;**

"ಕಾನೂನು ಮತ್ತು ನಿಯಮಗಳನ್ನು ರಚಿಸುವಲ್ಲಿ ಸರ್ಕಾರಕ್ಕೆ ನೆರವಾಗುವ ದೃಷ್ಟಿಯಿಂದ ವಿವಿಧ ವಲಯದಲ್ಲಿ ಅನುಭವ ಹಾಗೂ ವಿಶೇಷ ಜ್ಞಾನ ಹೊಂದಿರುವ ಸದಸ್ಯರನ್ನು ನಾಮನಿರ್ದೇಶನ ಮಾಡುವುದರ ಮೂಲಕ 1907ರಲ್ಲಿ ಕರ್ನಾಟಕ ವಿಧಾನಪರಿಷತ್ತನ್ನು ಸ್ಥಾಪಿಸಲಾಗಿರುತ್ತದೆ. ಸ್ವಾತಂತ್ರ್ಯ ನಂತರದ ದಿನಗಳಲ್ಲಿ ಸ್ಥಳೀಯ ಸಂಸ್ಥೆಗಳಿಂದ, ಪದವೀಧರ ಕ್ಷೇತ್ರಗಳಿಂದ, ಶಿಕ್ಷಕರ ಕ್ಷೇತ್ರದಿಂದ ಮತ್ತು ವಿಧಾನಸಭೆಯ ಸದಸ್ಯರಿಂದ ಹಾಗೂ ಘನತವೆತ್ತ ರಾಜ್ಯಪಾಲರಿಂದ ನಾಮನಿರ್ದೇಶನ ಮಾಡಿದ ಸದಸ್ಯರುಗಳು ವಿಧಾನಪರಿಷತ್ತಿಗೆ ವಿಜ್ಞಾನಿಗಳು, ನ್ಯಾಯವಾದಿಗಳು, ಪತ್ರಕರ್ತರು, ಸಾಮಾಜಿಕ ಹೋರಾಟಗಾರರು, ಕೃಷಿಕರು, ಸಾಹಿತಿಗಳು ಮತ್ತು ಶಿಕ್ಷಣ ತಜ್ಞರುಗಳು ಆಯ್ಕೆಗೊಂಡು ಸರ್ಕಾರಕ್ಕೆ ಕಾನೂನು ಮಾಡುವುದರ ವಿಷಯದಲ್ಲಿ ವಿಶೇಷವಾದ ಮತ್ತು ನ್ಯಾಯಿಕ ಹಾಗೂ ನಿಖರ ಸಲಹೆ ಸೂಚನೆಗಳನ್ನು ನೀಡುವ ದೃಷ್ಟಿಯಿಂದ ರಾಜ್ಯದ ಮೇಲ್ಮನೆಯನ್ನು ಪ್ರತಿಷ್ಠಾಪಿಸಲಾಗಿರುತ್ತದೆ. ಆದರೆ, ಇತ್ತೀಚಿನ ದಿನಗಳಲ್ಲಿ ಪ್ರಸ್ತಾಪಿಸಿದ ವಿಭಾಗದಲ್ಲಿ ಪರಿಣತಿ ಹೊಂದಿರುವ ಅನುಭವಸ್ಥರನ್ನು ವಿಧಾನಪರಿಷತ್ತಿಗೆ ನಾಮನಿರ್ದೇಶನ ಮಾಡುವ ಪದ್ಧತಿಯನ್ನು ಅನುಸರಿಸದೆ ರಾಜಕೀಯ ಒತ್ತಡದಿಂದ ಮತ್ತು ಸಾರ್ವತ್ರಿಕ ಚುನಾವಣೆಯಲ್ಲಿ ಸೋಲನ್ನು ಅನುಭವಿಸಿದ ವ್ಯಕ್ತಿಗಳಿಗೆ

ವಿಧಾನಪರಿಷತ್ತಿಗೆ ನಾಮನಿರ್ದೇಶನ ಮಾಡುತ್ತಿರುವುದರಿಂದ ವಿಧಾನಪರಿಷತ್ತಿಗೆ ಕುಂದುಂಟಾಗುತ್ತಿದೆ. ಅಲ್ಲದೆ ವಿಧಾನಪರಿಷತ್ತು ಸಹ ವಿಧಾನಸಭೆಯ ಪರ್ಯಾಯ ವೇದಿಕೆಯಾಗಿರುತ್ತದೆ. "ದೇಶದ ಬಹು ರಾಜ್ಯಗಳಲ್ಲಿ ಇಲ್ಲದ ವಿಧಾನಪರಿಷತ್ತು ರಾಜ್ಯದಲ್ಲಿಯೂ ಸಹ ಇರುವುದು ಅವಶ್ಯಕವೆನಿಸುವುದಿಲ್ಲ, ಆದಕಾರಣ ನಮ್ಮ ರಾಜ್ಯದಲ್ಲಿರುವ ವಿಧಾನಪರಿಷತ್ತಿನ ವಿಸರ್ಜನೆ" ಕುರಿತು ಈ ಸದನವು ನಿರ್ಣಯಿಸುತ್ತದೆ.

**ಎಂ.ಗುರುರಾಜ**
ಕಾರ್ಯದರ್ಶಿ

---

*Raj Nawgoudu*

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
(http://kla.kar.nic.in/assembly/lob/lob.htm)